ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 05-05-2017

## ಪತ್ರಿಕಾ ಪ್ರಕಟಣೆ

# ಮುಖ್ಯಮಂತ್ರಿಯವರನ್ನು ಭೇಟಿ ಮಾಡಿದ ಲಿಬರ್ಟಿ ಶೂಸ್ ಕಂಪನಿ ಅಧ್ಯಕ್ಷ –ಪಾದರಕ್ಷೆ ಉದ್ಯಮ ಕುರಿತು ಚರ್ಚೆ

**ಬೆಂಗಳೂರು, ಮೇ 5 (ಕರ್ನಾಟಕ ವಾರ್ತೆ)**

ಲಿಬರ್ಟಿ ಶೂಸ್ ಕಂಪನಿಯ ಚೇರ್ಮನ್, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆದೇಶ್ ಗುಪ್ತ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿದ್ದರು.

ವಿಧಾನಸೌಧದ ಕಚೇರಿಯಲ್ಲಿ ಮುಖ್ಯಮಂತ್ರಿಗಳನ್ನು ಭೇಟಿಯಾದ ಆದೇಶ್ ಗುಪ್ತ ಅವರು ಪಾದರಕ್ಷೆ ಉದ್ಯಮಕ್ಕೆ ಸಂಬಂಧಿಸಿದಂತೆ ಚರ್ಚೆ ನಡೆಸಿದರು.

ಪಾದರಕ್ಷೆ ಉದ್ಯಮಕ್ಕೆ ವಿಶೇಷ ನೀತಿ ರೂಪಿಸಬೇಕು. ಇದರಿಂದ ರಾಜ್ಯದಲ್ಲಿ ಉದ್ಯಮ ಬೆಳೆಯಲು ಅನುಕೂಲವಾಗುತ್ತದೆ. ಹೆಚ್ಚು ಬಂಡವಾಳ ಹೂಡಿಕೆ ಆಗುವುದರ ಜೊತೆಗೆ ನಿರುದ್ಯೋಗಿಗಳಿಗೆ ಉದ್ಯೋಗ ಅವಕಾಶ ಸಿಗುತ್ತದೆ ಎಂದು ಹೇಳಿದರು.

ಪಾದರಕ್ಷೆ ಉದ್ಯಮದ ಮೇಲೆ ಜಿಎಸ್ ಟಿ ದರ ಅಧಿಕವಾಗುವ ಸಾಧ್ಯತೆ ಕುರಿತು ಕೇಂದ್ರದ ಗಮನ ಸೆಳೆಯುವಂತೆ ಕೋರಿದರು. ಜಿಎಸ್ ಟಿ ಮಂಡಳಿ ಸಭೆಯಲ್ಲಿ ಈ ಕುರಿತು ಚರ್ಚಿಸುವುದಾಗಿ ಮುಖ್ಯಮಂತ್ರಿಗಳು ಹೇಳಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಪ್ರಸಾದ್, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಎಲ್.ಕೆ.ಅತೀಕ್ ಮಾತುಕತೆ ವೇಳೆ ಹಾಜರಿದ್ದರು.

# ರಾಮನಗರ ಮತ್ತು ಧಾರವಾಡದಲ್ಲಿ ಮಾವು ಅಭಿವೃದ್ಧಿ ಕೇಂದ್ರ ಸ್ಥಾಪನೆ

**ಬೆಂಗಳೂರು, ಮೇ 5 (ಕರ್ನಾಟಕ ವಾರ್ತೆ)**

ರಾಮನಗರ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಮಾವು ಅಭಿವೃದ್ಧಿ ಕೇಂದ್ರ ಸ್ಥಾಪನೆ ಮಾಡುವ ಸಲುವಾಗಿ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಎರಡೂ ಜಿಲ್ಲೆಗಳಲ್ಲಿ ಕೇಂದ್ರ ಸ್ಥಾಪನೆಗೆ ತಲಾ 10 ಎಕರೆ ಭೂಮಿಯನ್ನು ಗುರುತಿಸಲಾಗಿದೆ ಎಂದು ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ತಿಳಿಸಿದರು.

ಇಂದು ಲಾಲ್‌ಬಾಗ್‌ನಲ್ಲಿ ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮ ಮತ್ತು ತೋಟಗಾರಿಕೆ ಇಲಾಖೆಯ ಸಹಭಾಗಿತ್ವದಲ್ಲಿ ಏರ್ಪಡಿಸಲಾಗಿರುವ ಮಾವು ಮತ್ತು ಹಲವು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಮುಖ್ಯಮಂತ್ರಿಗಳು ಉದ್ಘಾಟಿಸಿದ ನಂತರ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಚಿವರು ರಾಜ್ಯವು ಮಾವು ಬೆಳೆಯಲ್ಲಿ ದೇಶದಲ್ಲಿ ಪ್ರಥಮ ಸ್ಥಾನವನ್ನು ಪಡೆದಿದೆ. ಆದ್ದರಿಂದ ಮಾವು ಬೆಳೆಗಾರರ ಆದಾಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರವು ಮಾವು ಅಭಿವೃದ್ಧಿ ಕೇಂದ್ರ ಸ್ಥಾಪಿಸಲು ಮುಂದಾಗಿದೆ ಎಂದರು.

ಕಳೆದ ವರ್ಷದಲ್ಲಿ 6700 ಟನ್ ಮಾವು ಅನ್ನು ಹೊರದೇಶಕ್ಕೆ ರಫ್ತು ಮಾಡುವ ಮೂಲಕ 590 ಕೋಟಿ ರೂ. ವಿದೇಶಿ ವಿನಿಮಯವನ್ನು ಗಳಿಸಲಾಗಿತ್ತು. ಆದರೆ ಈ ಬಾರಿ ಮಳೆಯ ಅಭಾವದಿಂದ ಮಾವಿನ ಇಳುವರಿ ಸ್ವಲ್ಪ ಕಡಿಮೆಯಾಗಿದ್ದರೂ, ಮಾವಿನ ಅಭಾವವೇನು ಕಂಡುಬಂದಿಲ್ಲ. ಆದಾಗ್ಯೂ ಈ ವರ್ಷ 10,000 ಟನ್ ಮಾವನ್ನು ವಿದೇಶಕ್ಕೆ ರಫ್ತು ಮಾಡುವ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದರು.

ಗ್ರಾಹಕರಿಗೆ ಕಾರ್ಬೈಡ್ ಮುಕ್ತ, ಸಹಜವಾಗಿ ಮಾಗಿದ ಹಣ್ಣುಗಳನ್ನು ಒದಗಿಸುವುದು ಈ ಮೇಳದ ಮುಖ್ಯ ಉದ್ದೇಶವಾಗಿದೆ. ವಿದೇಶದವರೂ ಕೂಡ ಕಾರ್ಬೈಡ್ ಮುಕ್ತ ಮಾವನ್ನು ಒದಗಿಸುವಂತೆ ಕೋರುವುದರಿಂದ ಎಪಿಎಂಸಿ ಮತ್ತು ಮಾವು ಅಭಿವೃದ್ಧಿ ನಿಗಮದ ಸಹಯೋಗದೊಂದಿಗೆ ರಾಜ್ಯಾದ್ಯಂತ ಇಥಲೀನ್ ಅನಿಲದ ಮೂಲಕ ಹಣ್ಣು ಮಾಡುವ 100 ಘಟಕಗಳನ್ನು ತೆರೆಯಲಾಗುತ್ತಿದೆ ಎಂದು ಸಚಿವರು ಹೇಳಿದರು.

ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮದ ಅಧ್ಯಕ್ಷರಾದ ಎಲ್. ಗೋಪಾಲಕೃಷ್ಣ ಅವರು ಮಾವು ಮತ್ತು ಹಲಸು ಹಣ್ಣುಗಳ ಬೆಳೆಗಾರರು ಮತ್ತು ಗ್ರಾಹಕರ ನಡುವೆ ನೇರ ಸಂಪರ್ಕ ಕಲ್ಪಿಸಿ ಬೆಳೆಗಾರರಿಗೆ ಹಾಗೂ ಗ್ರಾಹಕರಿಗೆ ರುಚಿಯಾದ ತಾಜಾ

ಹಣ್ಣುಗಳು ಯೋಗ್ಯ ಬೆಲೆಗೆ ದೊರಕುವಂತೆ ಈ ಮೇಳದಲ್ಲಿ ವ್ಯವಸ್ಥೆ ಮಾಡಲಾಗಿದೆ. ಮೇ 24 ರವರೆಗೆ ನಡೆಯಲಿರುವ ಈ ಮೇಳದಲ್ಲಿ ಗ್ರಾಹಕರು ಮಾವು ಮತ್ತು ಹಲಸಿನಲ್ಲಿರುವ ಉತ್ತಮ ತಳಿಗಳನ್ನು ವೀಕ್ಷಿಸುವ ಜೊತೆಗೆ ಸವಿಯುವ ಅವಕಾಶವನ್ನು ಒದಗಿಸಿಕೊಡಲಾಗಿದೆ ಎಂದರು.

ಮೇಳದಲ್ಲಿ ಬಾದಾಮಿ, ರಸಪುರಿ, ತೋತಾಪುರಿ, ಮಲ್ಲಿಕಾ, ನೀಲಂ, ಮಲಗೋವ, ಬಂಗನಪಲ್ಲಿ, ಅಮ್ರಪಾಲಿ, ಸೇಂಧೂರ ಸೇರಿದಂತೆ 30 ರಿಂದ 40 ಮಾವು ಗಳಿ ಹಣ್ಣುಗಳನ್ನು ಮತ್ತು ಚಂದ್ರ ಹಲಸು, ರುದ್ರಾಕ್ಷಿ, ಸಿಂಗಪುರ ಹಲಸು, ಹಳ್ಳಿ ಮೈಸೂರು ಹಲಸು ಸೇರಿದಂತೆ 10 ರಿಂದ 12 ವಿವಿಧ ತಳಿಯ ಹಲಸನ್ನು ಪ್ರದರ್ಶನ ಮತ್ತು ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಪ್ರತಿದಿನ ಬೆಳಿಗ್ಗೆ 8.00 ರಿಂದ ಸಂಜೆ 7.00 ಗಂಟೆಯ ತನಕ ಗ್ರಾಹಕರಿಗೆ ಮುಕ್ತವಾಗಿರುತ್ತದೆ.

**ಹಲಸಿನ ಹಲ್ವ ಸವಿದ ಮುಖ್ಯಮಂತ್ರಿಗಳು:**

ಮಾವು ಮತ್ತು ಹಲಸು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಉದ್ಘಾಟಿಸಿದ ಮುಖ್ಯಮಂತ್ರಿಯವರು ಹಲಸಿನ ಹಣ್ಣಿನ ತೊಳೆಯನ್ನು ಸ್ವತ: ತಾವೇ ಬಿಡಿಸಿಕೊಂಡು ತಿಂದರಲ್ಲದೆ ಹಲಸಿನಿಂದ ಮಾಡಲಾದ ಹಲ್ವವನ್ನು ಸವಿದರು. ಇವರೊಂದಿಗೆ ತೋಟಗಾರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಮತ್ತು ಮಾವು ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಲ್ ಗೋಪಾಲಕೃಷ್ಣ ಅವರು ಹಲಸಿನ ರುಚಿ ಸವಿದರು.

ಎಸ್‌ಎಂ:ಬಿಜಿಪಿ:ಜಿಪಿಆರ್.

# ಸ್ಪರ್ಧಾತ್ಮಕ ಪರೀಕ್ಷೆ – ಪರೀಕ್ಷಾ ಕೇಂದ್ರ ಬದಲಾವಣೆ

ಬೆಂಗಳೂರು, ಮೇ 5 (ಕರ್ನಾಟಕ ವಾರ್ತೆ)

2017 ನೇ ಸಾಲಿನ ಅಬಕಾರಿ ಇಲಾಖೆಯಲ್ಲಿನ ಅಬಕಾರಿ ರಕ್ಷಕರು ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಆಯೋಗವು ಮೇ 7 ರಂದು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಿದ್ದು, ಆ ದಿನದಂದು **"B.L.D.E.A's Shri B.M. Patil Institute of Nursing Sciences, BLDE Campus, Solapur Road, Bijapur"**, ಈ ಪರೀಕ್ಷಾ ಕೇಂದ್ರಕ್ಕೆ ಬದಲಾಗಿ ಇದೇ ಸಂಸ್ಥೆಯ ಅದೇ ಕ್ಯಾಂಪಸ್‌ನಲ್ಲಿಯೇ ಇರುವ **B.L.D.E.A's Medical College, Building Campus, Solapur Road, Bijapur – 586 103"** ಈ ಕಾಲೇಜನ್ನು ಪರೀಕ್ಷಾ ಉಪ ಕೇಂದ್ರವನ್ನಾಗಿ

ಸ್ಥಳಾಂತರಿಸಲಾಗಿದೆ. ಅದರಂತೆ ಬದಲಾವಣೆಗೊಂಡಿರುವ ಪರೀಕ್ಷಾ ಉಪಕೇಂದ್ರದಲ್ಲಿ ಆಯಾ ಅಭ್ಯರ್ಥಿಗಳು ಹಾಜರಾಗುವಂತೆ ಕರ್ನಾಟಕ ಲೋಕಸೇವಾ ಆಯೋಗ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಅಮಾನತ್ತು

ಬೆಂಗಳೂರು, ಮೇ 5 (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತ ಸುಬೋಧ್ ಯಾದವ್ ಅವರು ಚಿಕ್ಕೋಡಿಯ ಅಪರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಯಾದ ಡಾ. ಎಸ್.ವಿ. ಮುನ್ಯಾಳ ಅವರ ವಿರುದ್ಧ ಕರ್ತವ್ಯಲೋಪ/ದುರ್ನಡತೆ ಆರೋಪದ ಬಗ್ಗೆ ಶಿಸ್ತುಕ್ರಮ ಬಾಕಿ ಇರಿಸಿ ಈ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸಿರುತ್ತಾರೆ.

ಎಸ್‌ಎಂ::ಜಿಪಿಆರ್.

# ಅಂತಿಮ ಆಯ್ಕೆ ಪಟ್ಟಿ ವೆಬ್‌ಸೈಟ್‌ನಲ್ಲಿ ಪ್ರಕಟ

ಬೆಂಗಳೂರು, ಮೇ 5 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಪೌರಾಡಳಿತ ಇಲಾಖೆಯಲ್ಲಿನ ಮಹಾನಗರ ಪಾಲಿಕೆಗಳಲ್ಲಿ ತೋಟಗಾರಿಕೆ ಸಹಾಯಕರ ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಮತ್ತು ಸದರಿ ಹುದ್ದೆಗಳ ಕಟ್-ಆಫ್ ಅಂಕಗಳನ್ನು ಹಾಗೂ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯಲ್ಲಿನ ಲೆಕ್ಕಪರಿಶೋಧಕರು, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿನ ಕಿವುಡು ಮಕ್ಕಳ ಶಾಲೆಯಲ್ಲಿ ಪದವಿ ಪೂರ್ವ ಸಹಾಯಕರ ಹುದ್ದೆಗಳು, ವಿಕಲಚೇತನರ ಹಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿನ ಅಂಧ ಮಕ್ಕಳ ಶಾಲೆಯಲ್ಲಿ ಪದವಿ ಪೂರ್ವ ಸಹಾಯಕರ ಹುದ್ದೆಗಳು ಮತ್ತು ವಿಕಲಚೇತನರ ಹಾಗು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿನ ಮ್ಯೂಜಿಕ್ ಟೀಚರ್ ಗ್ರೇಡ್ – 3 (ಹೈ.ಕ) ಹುದ್ದೆಯ ಅಂತಿಮ ಆಯ್ಕೆಪಟ್ಟಿಯನ್ನು ಮೇ 4 ರಂದು ಕರ್ನಾಟಕ ಲೋಕಸೇವಾ ಆಯೋಗದ ವೆಬ್‌ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಪೌರಾಡಳಿತ ಇಲಾಖೆಯಲ್ಲಿನ ಮಹಾನಗರ ಪಾಲಿಕೆಗಳಲ್ಲಿ ತೋಟಗಾರಿಕೆ ಸಹಾಯಕರ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560 001, ಇವರಿಗೆ ಸಲ್ಲಿಸಬಹುದು. ನಿಗದಿತ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ::ಜಿಪಿಆರ್.

## ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನೆ

ಬೆಂಗಳೂರು, ಮೇ 5 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಮಹಿಳ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಮತ್ತು ಅಧೀಕ್ಷಕರ ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ಮೇ 16 ರಂದು ಬೆಳಿಗ್ಗೆ 9.30 ಗಂಟೆಗೆ ಆಯೋಗದ ಕೇಂದ್ರ, ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in ರಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಸೂಚನಾ ಪತ್ರಗಳನ್ನು ಆಯೋಗದ ಅಂತರ್ಜಾಲದಿಂದ ಮೇ 6 ರಿಂದ ಡೌನ್‌ಲೋಡ್ ಮಾಡಿಕೊಳ್ಳುವಂತೆಯು ಹಾಗೂ ಸೂಚನಾ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ತಾಂತ್ರಿಕ ಸಮಸ್ಯೆಗಳು ಉಂಟಾದಲ್ಲಿ Help Line ಸಂಖ್ಯೆ 7337830894 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ::ಜಿಪಿಆರ್.

## ಆಧುನಿಕತೆ ಸದ್ಬಳಕೆ ಮಾಡಿಕೊಳ್ಳದ ಕಾರಣ

## ನೀರು ನಿರ್ವಹಣೆಯಲ್ಲಿ ಹಿಂದೆ ಬಿದ್ದಿದ್ದೇವೆ – ಮುಖ್ಯ ಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಮೇ 5 (ಕರ್ನಾಟಕ ವಾರ್ತೆ)

ದೇಶದಲ್ಲಿ ವಿಜ್ಞಾನ, ತಂತ್ರಜ್ಞಾನ ಇಷ್ಟೊಂದು ಬೆಳೆದಿದ್ದರೂ ಅದನ್ನು ಸರಿಯಾಗ ಸದ್ಬಳಕ್ಕೆ ಮಾಡಿಕೊಳ್ಳದ ಕಾರಣ ನಾವು ಇಂದಿಗೂ ನೀರು ನಿರ್ವಹಣೆಯಲ್ಲಿ ಹಿಂದೆ ಬಿದ್ದಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಜಲಸಂಪನ್ಮೂಲ ಇಲಾಖೆ ಇಂದು ಏರ್ಪಡಿಸಿದ್ದ 2016 ನೇ ಸಾಲಿನ ನೀರಾವರಿ ತಜ್ಞ ಎಸ್.ಜಿ. ಬಾಳೇಕುಂದ್ರಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು ನೀರಿನ ನಿರ್ವಹಣೆ ಬಗ್ಗೆ ಹೊಸ ಹೊಸ ಆವಿಷ್ಕಾರಗಳು, ಹೊಸ ಬದಲಾವಣೆಗಳು ಬಂದಾಗ ಮಾತ್ರ ರಾಜ್ಯ ನೀರಾವರಿ ಕ್ಷೇತ್ರದಲ್ಲಿ ಪ್ರಗತಿ ಸಾಧಿಸುತ್ತದೆ. ಆ ನಿಟ್ಟಿನಲ್ಲಿ ನಮ್ಮ ಇಂಜಿನಿಯರ್‌ಗಳು ಕಾರ್ಯಪ್ರವೃತ್ತರಾಗಬೇಕು ಎಂದು ಇಂಜಿನಿಯರುಗಳಿಗೆ ಕಿವಿಮಾತು ಹೇಳಿದರು.

ವಿದೇಶಗಳಲ್ಲಿ ನೀರು ನಿರ್ವಹಣೆ ಅತ್ಯುತ್ತಮವಾಗಿದೆ. ಆ ಮಾದರಿಗಳನ್ನು ನಾವು ಕೂಡ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದ ಮುಖ್ಯಮಂತ್ರಿ ಅವರು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಜಲಸಂಪನ್ಮೂಲ ಇಲಾಖೆಗೆ 60 ಸಾವಿರ ಕೋಟಿ ರೂ. ಹಣ ಬಿಡುಗಡೆ ಮಾಡಿದೆ. ಆದರೆ ಯೋಜನೆಗಳ ರೂಪುರೇಷೆಗಳನ್ನು ತಯಾರು ಮಾಡುವಲ್ಲಿ ನಮ್ಮ ಇಂಜಿನಿಯರುಗಳು ಎಡವುತ್ತಿದ್ದು ಇದರಿಂದಾಗಿ ಸರ್ಕಾರಕ್ಕೆ ಹೆಚ್ಚಿನ ಹಣಕಾಸಿನ ಹೊರೆಯಾಗುತ್ತಿದೆ ಎಂದರು.

ನೀರಾವರಿ ಯೋಜನೆಗಳು ಕಾಲಮಿತಿಯೊಳಗೆ ಪೂರ್ಣಗೊಂಡಲ್ಲಿ ಸರ್ಕಾರಕ್ಕೆ ಹೆಚ್ಚಿನ ಹಣಕಾಸಿನ ಹೊರೆಯಾಗುವುದಿಲ್ಲ. ಯೋಜನೆಗಳನ್ನು ರೂಪಿಸುವಾಗಲೇ ಇಂತಹ ಸಮಯಕ್ಕೆ ಯೋಜನೆ ಪೂರ್ಣಗೊಳಿಸುವಂತೆ ಗುರಿಯಿಟ್ಟು ಅಧಿಕಾರಿಗಳು ಕರ್ತವ್ಯ ನಿರ್ವಹಿಸೇಕು ಎಂದು ಮುಖ್ಯಮಂತ್ರಿಗಳು ಸಲಹೆ ನೀಡಿದರು.

ಸರ್.ಎಂ. ವಿಶ್ವೇಶ್ವರಯ್ಯ, ಬಾಳೇಕುಂದ್ರಿ ಅವರು ಯಾವ ರೀತಿ ಕೆಲಸ ಮಾಡುತ್ತಿದ್ದರು ಎಂಬುದನ್ನು ಅರಿತು ಅವರಂತೆ ಕೆಲಸ ಮಾಡುವ ಮನಸ್ಥಿತಿಯನ್ನು ನಮ್ಮ ಇಂಜಿನಿಯರುಗಳು ಮೈಗೂಡಿಸಿಕೊಳ್ಳಬೇಕು ಎಂದರು.

ಬಾಳೇಕುಂದ್ರಿ ಅವರು ರಾಜ್ಯ ಕಂಡ ಶ್ರೇಷ್ಠ ನೀರಾವರಿ ತಜ್ಞ ಎಂದು ತಿಳಿಸಿದ ಜಲ ಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ಅವರು, ಅವರನ್ನು ಎರಡನೇ ವಿಶ್ವೇಶ್ವರಯ್ಯ ಅಂತಲೇ ಕರೆಯಬಹುದು. ರಾಜ್ಯ ಹಾಗೂ ದೇಶದ ಹಲವಾರು ನೀರಾವರಿ ಯೋಜನೆಗಳ ಅನುಷ್ಠಾನದಲ್ಲಿ ಅವರ ಸೇವೆ ಅಪಾರ ಎಂದು ಗುಣಗಾನ ಮಾಡಿದರು.

ರಾಜ್ಯದ ಜಲ ಹಂಚಿಕೆ ವಿಚಾರದಲ್ಲಿ ಬಾಳೇಕುಂದ್ರಿ ಅವರು ರಾಜ್ಯಕ್ಕೆ ಸಲಹೆ ಸೂಚನೆ ನೀಡುತ್ತಿದ್ದರು ಎಂದು ಬಾಳೇಕುಂದ್ರಿ ಅವರ ಪತ್ನಿ ಶ್ರೀಮತಿ ಪ್ರೊ. ಕಮಲ ಬಾಳೇಕುಂದ್ರಿ ಅವರು ಸ್ಮರಿಸಿಕೊಂಡರು.

2016 ನೇ ಸಾಲಿನ ಎಸ್.ಜಿ. ಬಾಳೇಕುಂದ್ರಿ ಪ್ರಶಸ್ತಿಯನ್ನು ಇಂಜಿನಿಯರುಗಳಾದ ಮಾಧವ, ಸಿ.ಎಲ್. ಪುಟ್ಟಸ್ವಾಮಿ, ಪಿ.ಕೆ. ಶಂಕರ್, ಶ್ರೀಮತಿ ಪ್ರೇಮಲತಾ, ರಾಮನಗೌಡ, ಎಲ್. ಹಳ್ಳೂರು ಅವರಿಗೆ ನೀಡಿ ಗೌರವಿಸಲಾಯಿತು.

ಲೋಕೋಪಯೋಗಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಶಾಸಕ ಪುಟ್ಟರಂಗಶೆಟ್ಟಿ, ಜಲಸಂಪನ್ಮೂಲ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಕೇಶ್ ಸಿಂಗ್, ಕಾರ್ಯದರ್ಶಿ ಗುರುಪಾದಸ್ವಾಮಿ, ನೀರಾವರಿ ನಿಗಮಗಳ ಮುಖ್ಯಸ್ಥರು, ಗಣ್ಯರು ಸಭೆಯಲ್ಲಿ ಹಾಜರಿದ್ದರು.

ಎಸ್‌ಎಂ:ಕೆಪಿಪಿ:ಜಿಪಿಆರ್.

# ನೇಮಕ

**ಬೆಂಗಳೂರು, ಮೇ 5 (ಕರ್ನಾಟಕ ವಾರ್ತೆ)**

ಐ.ಎ.ಎಸ್. ಅಧಿಕಾರಿ ಶ್ರೀ ನಳಿನಿ ಅತುಲ್ ಅವರನ್ನು ಜನರಲ್ ಮ್ಯಾನೇಜರ್ (ಆರ್ ಅಂಡ್ ಆರ್ ಎಲ್ ಎ ಕ್ಯೂ) ಆಗಿ ಕೃಷ್ಣಾ ಮೇಲ್ದಂಡೆ ಯೋಜನೆ, ಬಾಗಲಕೋಟೆ ಇಲ್ಲಿಗೆ ನೇಮಕ ಮಾಡಲಾಗಿದೆ.

ಕೆ.ಎ.ಎಸ್. ಅಧಿಕಾರಿ ಶ್ರೀಮತಿ ರೂಪಾ ಎಂ.ಜಿ. ಅವರನ್ನು ಕೊಳ್ಳೇಗಾಲ ಉಪ ವಿಭಾಗ, ಚಾಮರಾಜನಗರ ಜಿಲ್ಲೆ ಇಲ್ಲಿ ಉಪ ವಿಭಾಗಾಧಿಕಾರಿ ಹುದ್ದೆಗೆ ನೇಮಕ ಮಾಡಲಾಗಿದೆ.